# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 23-03-2021 ಪ್ರಶ್ನೆ ಸಂಖ್ಯೆ : 1661(1970)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಹೆಚ್. ಎಂ. ರಮೇಶಗೌಡ(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 23-03-2021

ಉತ್ತರಿಸುವ ಸಚಿವರು: ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು

ವಿಷಯ : ರಾಜ್ಯದಲ್ಲಿರುವ ಮರಳು ನಿಕ್ಷೇಪಗಳ ಕುರಿತು

(ಅ) ರಾಜ್ಯದಲ್ಲಿ ಎಷ್ಟು ಮರಳು ನಿಕ್ಷೇಪಗಳನ್ನು ಗುರುತಿಸಲಾಗಿದೆ; ಇವುಗಳಲ್ಲಿ ಎಷ್ಟು ಮರಳು ನಿಕ್ಷೇಪಗಳನ್ನು ಹರಾಜು ಮುಖಾಂತರ ವಿಲೇವಾರಿ ಮಾಡಲಾಗಿದೆ; ಇವುಗಳನ್ನು ಹರಾಜಿನಲ್ಲಿ ಪಡೆದ ಗುತ್ತಿಗೆದಾರರು ಯಾರು; (ನಿಕ್ಷೇಪವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಕಳೆದ 3 ವರ್ಷಗಳಲ್ಲಿ ಅಕ್ರಮ ಮರಳು ದಾಸ್ತಾನು ಪ್ರಕರಣಗಳು ಬೆಳಕಿಗೆ ಬಂದಿದೆಯೇ; ಬಂದಿದ್ದಲ್ಲಿ, ಎಷ್ಟು ಪ್ರಮಾಣದ ಮರಳನ್ನು ಅಕ್ರಮವಾಗಿ ಸಂಗ್ರಹಿಸಲಾಗಿತ್ತು, ಯಾರು ಸಂಗ್ರಹಿಸಿದ್ದಾರೆ, ಇದಕ್ಕೆ ವಿಧಿಸಿರುವ ದಂಡವೆಷ್ಟು; (ಪ್ರಕರಣವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಅಕ್ರಮ ಮರಳು ದಾಸ್ತಾನುದಾರರ ವಿರುದ್ಧ ಮತ್ತು ಅಕ್ರಮ ಮರಳು ದಾಸ್ತಾನು ಮಾಡದಂತೆ ತಡೆಯಲು ವಿಫಲರಾಗಿರುವ ಅಧಿಕಾರಿಗಳ ವಿರುದ್ಧ ಸರ್ಕಾರವು ಕೈಗೊಂಡಿರುವ ಕ್ರಮಗಳೇನು; (ಪ್ರಕರಣವಾರು ಮಾಹಿತಿ ನೀಡುವುದು)

(ಈ) ಅಕ್ರಮ ಮರಳು ದಾಸ್ತಾನು ಮಾಡುವುದನ್ನು ತಡೆಗಟ್ಟಲು ಸರ್ಕಾರವು ವಹಿಸಿರುವ ಮುಂಜಾಗ್ರತಾ ಕ್ರಮಗಳೇನು? (ವಿವರ ನೀಡುವುದು)